ಸದನವು ಮಧ್ಯಾಹ್ನ 12–30 ಗಂಟೆಗೆ ಸಮಾವೇಶಗೊಂಡಿತು.
(ಸಭಾಧ್ಯಕ್ಷರು ಪೀಠವನ್ನಲಂಕರಿಸಿದರು)

ಅಧ್ಯಕ್ಷರು : ಈಗ ಮಾನ್ಯ ಮುಖ್ಯ ಮಂತ್ರಿಯವರಿಂದ 2013–14ನೇ ಸಾಲಿನ ಆಯವ್ಯಯ ಅಂದಾಜುಗಳನ್ನು ಮಂಡಿಸುವುದು.

(ಈ ಹಂತದಲ್ಲಿ ಬಿಜೆಪಿ ಸದಸ್ಯರಾದ ಶ್ರೀ ಹೆಚ್. ಎಸ್. ಶಂಕರಲಿಂಗೇಗೌಡರವರು ಸದನದ ಬಾವಿಗೆ ಬಂದು ಕಾವೇರಿ ನೀರಿನ ಬಗ್ಗೆ ಮಾತನಾಡುತ್ತಾ ತಾವು ತಂದಿದ್ದ water bottle ನಲ್ಲಿನ ನೀರನ್ನು ತಮ್ಮ ತಲೆಯ ಮೇಲೆ ಸುರಿದುಕೊಂಡರು)

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿ) : ಸನ್ಮಾನ್ಯ ಅಧ್ಯಕ್ಷರೆ, 2013–14ನೇ ಸಾಲಿನ ಆಯವ್ಯಯವನ್ನು ಮಂಡಿಸಲು ಹರ್ಷಿಸುತ್ತೇನೆ. ಮೊದಲಿಗೆ ಭಾಗ–1. ಈಗ ನಾನು ಆಯವ್ಯಯ ಭಾಷಣದ ಮೊದಲನೆ ಭಾಗವಾದಂಥ **"ಕೃಷಿ ಆಯವ್ಯಯ"**ವನ್ನು ಮಂಡಿಸುತ್ತಿದ್ದೇನೆ.

(ಈ ಹಂತದಲ್ಲಿ ಬಿಜೆಪಿ ಸದಸ್ಯರಾದ ಶ್ರೀ ಹೆಚ್. ಎಸ್. ಶಂಕರಲಿಂಗೇಗೌಡರವರು ಸದನದ ಬಾವಿಯಿಂದ ತಮ್ಮ ಸ್ಥಾನಕ್ಕೆ ತೆರಳಿದರು)

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿ);–
ಮಾನ್ಯ ಸಭಾಧ್ಯಕ್ಷರೆ,

1. 2013–14ನೇ ಸಾಲಿನ ಆಯವ್ಯಯವನ್ನು ಮಂಡಿಸಲು ಹರ್ಷಿಸುತ್ತೇನೆ.

ಭಾಗ–1

ಕೃಷಿ

1. ಈಗ ನಾನು ಆಯವ್ಯಯ ಭಾಷಣದ ಮೊದಲನೇ ಭಾಗವಾದ ಕೃಷಿ ಆಯವ್ಯಯವನ್ನು ಮಂಡಿಸುತ್ತಿದ್ದೇನೆ. ಇದು ನಮ್ಮ ಸರ್ಕಾರ ದೇಶದಲ್ಲೇ ಮೊಟ್ಟ ಮೊದಲ ಬಾರಿಗೆ ಪರಿಚಯಿಸಿ, ಸತತವಾಗಿ 3ನೇ ಬಾರಿಗೆ ಮಂಡಿಸಲಾಗುತ್ತಿರುವ ಕೃಷಿ ಆಯವ್ಯಯ. ಅತ್ಯಂತ ಸಂತೋಷದ ಸಂಗತಿಯೆಂದರೆ, ಕಳೆದ ಎರಡು ವರ್ಷಗಳಲ್ಲಿ ಮಂಡಿಸಿದ ಕೃಷಿ ಆಯವ್ಯಯಕ್ಕೆ ದೇಶದಾದ್ಯಂತ ಮೆಚ್ಚುಗೆ ವ್ಯಕ್ತವಾಗಿದ್ದು, ಹಲವಾರು